MARCH 11, 2026

## AKASHAVANI - DHARWAD

## PRADESH SAMACHARA (KANNADA) 12.00 P.M.

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಭಾರತ ಜನಗಣತಿ –2027, ರಾಜ್ಯದಲ್ಲಿ ಎರಡು ಹಂತಗಳಲ್ಲಿ ನಡೆಯಲಿದೆ.** ಮೊದಲ ಹಂತವಾಗಿ, ರಾಜ್ಯದಲ್ಲಿ ಮನೆಪಟ್ಟಿ ತಯಾರಿ ಕಾರ್ಯ, ಮುಂದಿನ ತಿಂಗಳು ಏಪ್ರಿಲ್ 16 ರಿಂದ, ಮೇ 15ರ ವರೆಗೆ ಆಯೋಜಿತವಾಗಿದೆ. ಇದಕ್ಕೂ ಮೊದಲು ಸ್ವಯಂ ಗಣತಿಯ ಆಯ್ಕೆ ನಾಗರಿಕರಿಗೆ ಲಭ್ಯವಿರುತ್ತದೆ ಎಂದು ಕೊಪ್ಪಳ ಜಿಲ್ಲಾಧಿಕಾರಿ ಡಾಕ್ಟರ ಸುರೇಶ ಬಿ.ಇಟ್ನಾಳ್ ತಿಳಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ, 2027 ರ ಜನಗಣತಿಗೆ ಸಂಬಂಧಿಸಿದಂತೆ, ಜಿಲ್ಲಾ ಹಂತದ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಆಯೋಜಿಸಿದ್ದ, ಮೂರು ದಿನಗಳ ತರಬೇತಿ ಕಾರ್ಯಾಗಾರದ ಪೂರ್ವಭಾವಿ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜನಗಣತಿ ಕಾರ್ಯಕ್ಕೆ ನೇಮಿಸಲ್ಪಡುವ ಅಧಿಕಾರಿಗಳು ಹಾಗೂ ಸಹಾಯಕ ಅಧಿಕಾರಿಗಳು, ಜನಗಣತಿ ಕರ್ತವ್ಯವನ್ನು ಅಚ್ಚುಕಟ್ಟಾಗಿ ನಿರ್ವಹಿಸುವಂತೆ ಅವರು ಸೂಚಿಸಿದರು.

<><><>

**ಸಂವಿಧಾನವು ದೇಶದ ಪ್ರಗತಿಯ** ಮೂಲಧಾತುವಾಗಿದೆ. ಪ್ರಜೆಗಳ ಗೌರವಯುತ ಬಾಳ್ವೆ ಹಾಗೂ ಸಮಾನ ಅವಕಾಶಗಳನ್ನು ಸಂವಿಧಾನದ ಮೂಲಕ, ಡಾಕ್ಟರ ಬಾಬಾ ಸಾಹೇಬ ಅಂಬೇಡ್ಕರ ಅವರು ನೀಡಿದ್ದಾರೆ ಎಂದು ಕಲಬುರಗಿ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಹೇಳಿದರು. ನಗರದ ಡಾಕ್ಟರ ಎಸ್.ಎಂ.ಪಂಡಿತ್ ರಂಗಮಂದಿರದಲ್ಲಿ ಆಯೋಜಿತ, ಡಾಕ್ಟರ ಬಿ.ಆರ್.ಅಂಬೇಡ್ಕರ್ ಅವರ ಸಾಮಾಜಿಕ ಚಿಂತನೆಗೆ, ಗಾನ ನಮನ ಅರ್ಪಿಸುವ 'ಭೀಮ ಗಾಯನ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಅಂಬೇಡ್ಕರ್ ಅವರ ಜೀವನ ಸಾಧನೆ, ಸಮಾನತೆಯ ಹೋರಾಟ, ಅಸ್ಪೃಶ್ಯತೆ ನಿರ್ಮೂಲನೆ, ಸ್ತ್ರೀ ಸಮಾನತೆ ಧ್ಯೇಯಗಳು ಮನನೀಯ ಎಂದರು.

<><><>

**ಹಿಂದೂಸ್ಥಾನಿ ಗಾಯಕ,** ಬಾಗಲಕೋಟೆಯ ರವೀಂದ್ರ ಸೊರಗಾವಿ, ಹಾರ್ಮೋನಿಯಂ ಕಲಾವಿದ, ಗದಗನ ಪಂಚಾಕ್ಷರಿ ಅಣ್ಣಿಗೇರಿ, ತಬಲ ವಾದಕ, ಬೀದರಿನ ವಿಠಲ ಪೂಜಾರಿ, ರಾಜ್ಯ ಸಂಗೀತ, ನೃತ್ಯ ಅಕಾದೆಮಿಯ, 2025–26ನೇ ಸಾಲಿನ, ವಾರ್ಷಿಕ ಪ್ರಶಸ್ತಿಗೆ ಭಾಜನರಾಗಿದ್ದಾರೆ. 'ಕರ್ನಾಟಕ ಕಲಾಶ್ರೀ' ವಾರ್ಷಿಕ ಪ್ರಶಸ್ತಿಗೆ ಭಾಜನರಾದ ಧಾರವಾಡದ ಮೃತ್ಯುಂಜಯ ಶೆಟ್ಟರ, ವಿಶ್ವದ ಹಲವು ರಾಷ್ಟ್ರಗಳಲ್ಲಿ ಸಂಗೀತ ಕಾರ್ಯಕ್ರಮಗಳನ್ನು ನೀಡಿದ್ದು, ಪ್ರದೇಶ ಸಮಾಚಾರಕ್ಕಾಗಿ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

**ರಾಜ್ಯದಲ್ಲಿ ಉದ್ಯೋಗಿನಿ ಯೋಜನೆಯನ್ನು** ಮಹಿಳೆಯರ ಸಬಲೀಕರಣದ ದೃಷ್ಟಿಯಿಂದ ಜಾರಿಗೆ ತರಲಾಗಿದೆ, ಸ್ಥಳೀಯ ಶಾಸಕರ ನೇತೃತ್ವದಲ್ಲಿ ಈ ಯೋಜನೆಯನ್ನು ಆಯಾ ಕ್ಷೇತ್ರಗಳಲ್ಲಿ ಜಾರಿಗೊಳಿಸಲಾಗುತ್ತಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಖಾತೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ ಹೇಳಿದರು. ವಿಧಾನಸಭೆಯಲ್ಲಿ ಶಾಸಕ ಸಿದ್ದು ಸವದಿ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ಉದ್ಯೋಗಿನಿ ಯೋಜನೆಯಡಿ ಸಾಕಷ್ಟು ಅರ್ಜಿಗಳು ಬಂದಿವೆ, ಇ–ಫೈಲಿಂಗ್ ಮೂಲಕ ಯೋಜನೆಯ ಲಾಭ ಫಲಾನುಭವಿಗಳಿಗೆ ತಲುಪುವಂತಾಗಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.

<><><>

**ಬೆಂಗಳೂರಿನ ಹೋಟೆಲ್‌ಗಳು ಹಾಗೂ ರೆಸ್ಟೋರೆಂಟ್‌ಗಳ** ಮೇಲೆ ಪರಿಣಾಮ ಬೀರುತ್ತಿರುವ, ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳ ಕೊರತೆಯ ಬಗ್ಗೆ ಕಳವಳ ವ್ಯಕ್ತಪಡಿಸಿರುವ ಸಂಸದ ಡಾಕ್ಟರ ಕೆ. ಸುಧಾಕರ, ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಖಾತೆ ಸಚಿವ ಹರದೀಪ ಸಿಂಗ್ ಪುರಿ ಅವರಿಗೆ ಪತ್ರ ಬರೆದು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿದ್ದಾರೆ. ಬೆಂಗಳೂರಿನಂತಹ ನಗರದಲ್ಲಿ, ಲಕ್ಷಾಂತರ ಜನ ವೃತ್ತಿಪರರು, ವಿದ್ಯಾರ್ಥಿಗಳು ಹಾಗೂ ಪ್ರಯಾಣಿಕರು ಪ್ರತಿದಿನ ಹೋಟೆಲ್‌ಗಳನ್ನು ಅವಲಂಬಿಸಿದ್ದು, ತುರ್ತು ಕ್ರಮ ಕೈಗೊಳ್ಳುವಂತೆ ವಿನಂತಿಸಿದ್ದಾರೆ.

<><><>

**ದೇಶೀಯ ಗ್ರಾಹಕರಿಗೆ ಯಾವುದೇ** ಇಂಧನ ಕೊರತೆಯಿಲ್ಲ ಹಾಗೂ ಈ ಬಗ್ಗೆ ಆತಂಕಪಡುವ ಅಗತ್ಯವಿಲ್ಲ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಖಾತೆ ಸಚಿವ ಹರ್ದೀಪ್ ಸಿಂಗ್ ಪುರಿ ಭರವಸೆ ನೀಡಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ನೀಡಿರುವ ಅವರು, ಭಾರತದ ಇಂಧನ ಆಮದು ಪ್ರಕ್ರಿಯೆ ವಿವಿಧ ಮೂಲಗಳು ಹಾಗೂ ಮಾರ್ಗಗಳ ಮೂಲಕ ನಿರಂತರವಾಗಿ ನಡೆಯುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><>

**ಅಂತಾರಾಷ್ಟ್ರೀಯ ಸೌರ ಒಕ್ಕೂಟದ** ಸಂಸ್ಥಾಪನಾ ದಿನದಂದು, ಜಾಗತಿಕ ಸಹಕಾರವನ್ನು ಬಲಪಡಿಸಲು ಹಾಗೂ ಸೂರ್ಯನಿಂದ ನಡೆಸಲ್ಪಡುವ ಸುಸ್ಥಿರ ಮತ್ತು ಇಂಧನ–ಸುರಕ್ಷಿತ ಭವಿಷ್ಯದತ್ತ ಪರಿವರ್ತನೆಯನ್ನು ವೇಗಗೊಳಿಸಲು ಭಾರತ ಬದ್ಧವಾಗಿದೆ ಎಂದು ನವ ಮತ್ತು ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಸೌರಶಕ್ತಿ ವಲಯದಲ್ಲಿ ದೂರದೃಷ್ಟಿಯ ಉಪಕ್ರಮಗಳನ್ನು ಪ್ರೋತ್ಸಾಹಿಸುವ ಹಾಗೂ ಅಳವಡಿಸುವ ನಿಟ್ಟಿನಲ್ಲಿ ಸರ್ಕಾರ ದೃಢವಾದ ಹೆಜ್ಜೆಗಳನ್ನು ಇರಿಸಿದೆ ಎಂದು ಅವರು ತಿಳಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>